728(977) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆಯ ಕುಮಟಾ ಘಟಕದಲ್ಲಿಯ ಅನೇಕ ಬಸ್‌ಗಳು ತುಂಬಾ ಹಳೆಯದಾಗಿದ್ದು ಆಗಾಗ ಕೆಟ್ಟು ನಿಲ್ಲುವುದು ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಘಟಕಕ್ಕೆ ಹೊಸ ಬಸ್‌ಗಳನ್ನು ನೀಡಿ ಪ್ರಯಾಣಿಕರಿಗೆ ಅನುಕೂಲ ಒದಗಿಸಲು ಸರ್ಕಾರ ಕ್ರಮಕ್ಕೈಗೊಳ್ಳುವುದೆ?

ಶ್ರೀ ಎನ್. ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಇಲ್ಲ.

ಆ) ಆದರೂ, ಕಾರ್ಯ ಯೋಜನೆಯ ಮೇರೆಗೆ ಘಟಕಕ್ಕೆ ಹೊಸ ಬಸ್ಸುಗಳನ್ನು ನೀಡಲಾಗುತ್ತಿದೆ, ಪ್ರಸಕ್ತ ಸಾಲಿನಲ್ಲಿ ಕುಟುಟಾ ಘಟಕಕ್ಕೆ ಇದುವರೆಗೂ 5 ಹೊಸ ಬಸ್ಸುಗಳನ್ನು ನೀಡಲಾಗಿರುತ್ತದೆ. ಇದಲ್ಲದೇ, ಇನ್ನೂ ಹೆಚ್ಚಿನ ಹೊಸ ಬಸ್ಸುಗಳನ್ನು ಪ್ರಸಕ್ತ ಸಾಲಿನಲ್ಲಿ ನೀಡಲು ಯೋಜಿಸಲಾಗಿದ್ದು, ಸದರಿ ಬಸ್ಸುಗಳನ್ನು ಹಂತ ಹಂತವಾಗಿ ನೀಡಲಾಗುವುದು.

729(978) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) : ಮಾನ್ಯ ಪ್ರವಾಸೋದ್ಯಮ, ಜವಳಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಉತ್ತರ ಕನ್ನಡ ಜಿಲ್ಲೆಯು ವೈವಿಧ್ಯಮಯ ಭೂ ಪ್ರದೇಶ, ಸುಂದರ ಕರಾವಳಿ ಕಿನಾರೆ, ಮಲೆನಾಡು, ಸುಪ್ರಸಿದ್ಧ ಯಾತ್ರಾ ಸ್ಥಳಗಳನ್ನು ಹೊಂದಿದ್ದರೂ ಸಾಕಷ್ಟು ಪ್ರಮಾಣದಲ್ಲಿ ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡದೆ ಇರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಈ ದಿಶೆಯಲ್ಲಿ ಯಾವ ರೀತಿ ಕಾರ್ಯಕ್ರಮ ಹಮ್ಮಿಕೊಂಡಿದೆ;

ಇ) ಪ್ರವಾಸೋದ್ಯಮಕ್ಕೆ ಸಾಕಷ್ಟು ನೆರವು ನೀಡುವುದರ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ಬಿ. ಶ್ರೀರಾಮುಲು (ಪ್ರವಾಸೋದ್ಯಮ, ಜವಳಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು) :

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡಲಾಗುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ಸ್ಥಳಗಳ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಲು ಅನೇಕ ಖಾಸಗಿ ಹೋಟೆಲ್‌ಗಳಿಗೆ ಅನುಮೋದನೆ ನೀಡಿ ಸಹಾಯಧನ ನೀಡಲಾಗಿದೆ.